## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 73 ಗ್ರಾಪಂಕಾ 2020 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:28-04-2021

## ಸುತ್ತೋಲೆ

**ವಿಷಯ:** ಕೋವಿಡ್-19 (ಕೊರೊನಾ ವೈರಸ್) ಎರಡನೇ ಅಲೆಯು ವ್ಯಾಪಕವಾಗಿ ಹೆಚ್ಚುತ್ತಿರುವುದರಿಂದ ಗ್ರಾಮ ಪಂಚಾಯಿತಿ ಹಾಗೂ ಗ್ರಾಮ ಮಟ್ಟದ ಕಾರ್ಯಪಡೆಯು ಜವಾಬ್ದಾರಿಗಳನ್ನು ನಿರ್ವಹಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 86 ಉಖಾಯೋ 2019 ದಿನಾಂಕ:27-03-2020.
2. ಸರ್ಕಾರದ ಸೇರ್ಪಡೆ ಸಂಖ್ಯೆ: ಗ್ರಾಅಪ 86 ಉಖಾಯೋ 2019 ದಿನಾಂಕ:07-04-2020, 27-04-2020 ಮತ್ತು 20-05-2020.
3. ಸರ್ಕಾರದ ಸುತ್ತೋಲೆ (ಸೇರ್ಪಡೆ) ಸಂಖ್ಯೆ:ಗ್ರಾಅಪಂರಾ 199 ಜಿಪಸ 2020, ದಿನಾಂಕ: 04-06-2020.
4. ಸರ್ಕಾರದ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 13-07-2020.
5. ಸರ್ಕಾರದ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 22-04-2021.

******

ಕೋವಿಡ್-19 (ಕೊರೊನಾ ವೈರಸ್) ಕಾಯಿಲೆಯು ಸಾಂಕ್ರಾಮಿಕ ರೋಗವಾಗಿದ್ದು, ವಿಶ್ವದಾದ್ಯಂತ ಸಾರ್ವಜನಿಕರಲ್ಲಿ ವ್ಯಾಪಕವಾಗಿ ಹರಡುತ್ತಿರುವುದು ತಿಳಿದ ವಿಷಯವಾಗಿದೆ. ಈ ಕಾಯಿಲೆಯನ್ನು ನಿಯಂತ್ರಿಸಲು ಹಾಗೂ ಒಬ್ಬರಿಂದ ಒಬ್ಬರಿಗೆ ಹರಡದಂತೆ ತಡೆಗಟ್ಟಲು ಸರ್ಕಾರವು ಹಲವಾರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ. ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಈ ಸೋಂಕು ಹರಡದಂತೆ ಗ್ರಾಮ ಪಂಚಾಯತಿಗಳ ವತಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖ (1) ಮತ್ತು ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆ ಮತ್ತು ಗ್ರಾಮ ಮಟ್ಟದ ಕಾರ್ಯಪಡೆ ರಚಿಸಿ ಆದೇಶಿಸಲಾಗಿದೆ.

ಉಲ್ಲೇಖ (4)ರ ಸರ್ಕಾರದ ಸುತ್ತೋಲೆಯಲ್ಲಿ ಕೋವಿಡ್-19 ವ್ಯಾಪಕವಾಗಿ ಹರಡದಂತೆ ಹಾಗೂ ಈ ಸಾಂಕ್ರಾಮಿಕ ರೋಗಕ್ಕೆ ತುತ್ತಾಗಬಹುದಾದ ದುರ್ಬಲ ವರ್ಗದವರನ್ನು ಹೋಮ್ ಕ್ವಾರೈಂಟೈನ್ ಮತ್ತು ಸೋಂಕಿತರನ್ನು ಮನೆಯಲ್ಲಿ ಪ್ರತ್ಯೇಕವಾಗಿರಿಸಿರುವ ಬಗ್ಗೆ ನಿಗಾವಹಿಸಲು ರಚಿಸಲಾದ ಗ್ರಾಮ ಪಂಚಾಯಿತಿ ಹೆಲ್ಪ್‌ಡೆಸ್ಕ್‌ಗಳು ಇನ್ನು ಮುಂದೆ ಗ್ರಾಮ ಪಂಚಾಯಿತಿ ಸಮುದಾಯ ಸಹಾಯವಾಣಿಗಳಾಗಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

ಉಲ್ಲೇಖ (5) ರ ಸರ್ಕಾರದ ಸುತ್ತೋಲೆಯಲ್ಲಿ ಹೆಚ್ಚುತ್ತಿರುವ ಕೋವಿಡ್-19 ಪ್ರಕರಣಗಳ 45 ವಯಸ್ಸಿನ ಮೇಲ್ಪಟ್ಟವರಿಗೆ ನೀಡುವ ಲಸಿಕಾಕರಣದ ಕಾರ್ಯವನ್ನು ವೃದ್ಧಿಸಲು ಇತರೆ ಇಲಾಖೆಗಳ ಪಾತ್ರಗಳು ಮತ್ತು ಜವಾಬ್ದಾರಿಗಳನ್ನು ನಿರ್ದಿಷ್ಟಪಡಿಸಿದ್ದು, ಅದರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಜವಾಬ್ದಾರಿ ನಿರ್ದಿಷ್ಟಪಡಿಸಿ ಕೋವಿಡ್-19 (ಕೊರೊನಾ ವೈರಸ್) ವ್ಯಾಪಕವಾಗಿ ಹರಡದಂತೆ ಹೆಚ್ಚುತ್ತಿರುವ ಕೋವಿಡ್-19 ಪ್ರಕರಣಗಳ 45 ವಯಸ್ಸಿನ ಮೇಲ್ಪಟ್ಟವರಿಗೆ

ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಪ್ರಸ್ತುತ ಕೋವಿಡ್–19 (ಕೊರೊನಾ ವೈರಸ್) ಎರಡನೇ ಅಲೆಯು ವ್ಯಾಪಕವಾಗಿ ಹೆಚ್ಚುತ್ತಿರುವುದರಿಂದ ಪ್ರತಿ ಗ್ರಾಮ ಪಂಚಾಯಿತಿಗಳಿಗೆ ಈ ಹಿಂದೆ ನೀಡಲಾದ ಸುತ್ತೋಲೆಗಳಲ್ಲಿನ ಎಲ್ಲಾ ಜವಾಬ್ದಾರಿಗಳನ್ನು ಮುಂದುವರೆಸುತ್ತಾ, ಗ್ರಾಮ ಪಂಚಾಯಿತಿಗಳು ಈ ಕೆಳಕಂಡ ಜವಾಬ್ದಾರಿಗಳನ್ನು ಸಹ ತಪ್ಪದೇ ನಿರ್ವಹಿಸಲು ಮತ್ತೊಮ್ಮೆ ಸೂಚಿಸಿದೆ.

1. ಉಲ್ಲೇಖ(1) ಮತ್ತು ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ರಚಿಸಲಾಗಿರುವ ಗ್ರಾಮ ಪಂಚಾಯತಿ ಮಟ್ಟದ ಕಾರ್ಯಪಡೆ ಮತ್ತು ಗ್ರಾಮ ಮಟ್ಟದ ಕಾರ್ಯಪಡೆಯು ಜವಾಬ್ದಾರಿಗಳನ್ನು ನಿರ್ವಹಿಸುವುದು.
2. ಗ್ರಾಮಾಂತರ ಪ್ರದೇಶಕ್ಕೆ ನಗರ ಪ್ರದೇಶಗಳಿಂದ ಹಿಂದಿರುಗುವ ವಲಸೆ ಕಾರ್ಮಿಕರಿಗೆ, ಮಹಿಳಾ ಕಾರ್ಮಿಕರಿಗೆ ಮತ್ತು ದುರ್ಬಲ ವರ್ಗದವರಿಗೆ, ಊಟ, ಮಾಸ್ಕ್ ಮತ್ತು ಸ್ಯಾನಿಟೈಜರ್‌ಗಳನ್ನು ಒದಗಿಸುವುದು.
3. ವಿಶೇಷವಾಗಿ ನಿರ್ಗತಿಕರಿಗೆ, ವಿಕಲಚೇತನರಿಗೆ, ಹಿರಿಯ ನಾಗರೀಕರಿಗೆ, ಮಾಜಿ ದೇವದಾಸಿಯರಿಗೆ, ತೃತೀಯ ಲಿಂಗಿಗಳಿಗೆ, ಮಹಿಳೆಯರಿಗೆ ಸ್ವಯಂ ಸೇವಕರಿಗೆ ಅವಶ್ಯ ಸೌಲಭ್ಯಗಳನ್ನು ಒದಗಿಸುವುದು.
4. ಕೋವಿಡ್–19 ಪ್ರಕರಣಗಳಲ್ಲಿ ಅರ್ಹ ವ್ಯಕ್ತಿಗಳಿಗೆ ನೀಡುವ ಲಸಿಕಾಕರಣದ ಕಾರ್ಯವನ್ನು ವೃದ್ಧಿಸಲು ಕ್ರಮಗಳನ್ನು ಕೈಗೊಳ್ಳುವುದು ಮತ್ತು ಲಸಿಕಾಕರಣದ 2ನೇ ಡೋಸ್ ನೀಡಿದ ನಂತರ ಪ್ರಮಾಣ ಪತ್ರವನ್ನು ಸಂಬಂಧಿಸಿದವರಿಗೆ ನೀಡುವುದು.
5. ಕೊರೋನಾ ತಡೆಗಟ್ಟುವಿಕೆಯಲ್ಲಿ ಕಾರ್ಯ ನಿರ್ವಹಿಸುವ ಸ್ವಯಂಸೇವಕರನ್ನು ಗುರುತಿಸಿ ಅವರ ದೂರವಾಣಿ ಸಂಖ್ಯೆಯನ್ನು ಪ್ರಕಟಿಸಿ, ಹಗಲು–ರಾತ್ರಿ ಪಾಳಿ ವ್ಯವಸ್ಥೆಯಲ್ಲಿ ಅವರು ಸೇವೆ ನೀಡಲು ಕ್ರಮಕೈಗೊಳ್ಳುವುದು.
6. ಗ್ರಾಮ ಪಂಚಾಯಿತಿ ಸಮುದಾಯ ಸಹಾಯವಾಣಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುವುದು.
7. ಗ್ರಾಮ ಪಂಚಾಯಿತಿಗಳು ಅವಶ್ಯ ಮಾಸ್ಕ್‌ಗಳು, ಸಾಬೂನುಗಳು ಮತ್ತು ಸ್ಯಾನಿಟೈಜರ್ ಇತ್ಯಾದಿ ಸ್ವಚ್ಛತಾ ಪರಿಕರಗಳು, ಊಟ, ಇತ್ಯಾದಿಗಾಗಿ 14ನೇ ಹಣಕಾಸು ಆಯೋಗದ ಉಳಿಕೆ ಅನುದಾನ, 15ನೇ ಹಣಕಾಸು ಆಯೋಗದ ಅನುದಾನ ಅಥವಾ ಸ್ವಂತ ಸಂಪನ್ಮೂಲವನ್ನು ಉಪಯೋಗಿಸಿಕೊಳ್ಳುವುದು.
8. ಸಮುದಾಯ ಸಹಾಯವಾಣಿಗಳ ವಿವರ ಮತ್ತು ಲಸಿಕಾಕರಣದ ಮಾಹಿತಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಕಾಲೋಚಿತಗೊಳಿಸಲು ಕ್ರಮವಹಿಸುವುದು.

ಮೇಲ್ಕಂಡಂತೆ ಗ್ರಾಮ ಪಂಚಾಯತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅವಶ್ಯವಾದ ನೆರವು, ಮಾರ್ಗದರ್ಶನ ಹಾಗೂ ಮೇಲ್ವಿಚಾರಣೆಯನ್ನು ಮಾಡಲು ಹಾಗೂ ಜಿಲ್ಲಾಧಿಕಾರಿಗಳ ಜೊತೆ ಸಮನ್ವಯ ಮಾಡಲು ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತೊಮ್ಮೆ ಸೂಚಿಸಿದೆ.

**(ಉಮಾ ಮಹಾದೇವನ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

28/4/2021

ಇವರಿಗೆ:

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಜಿಲ್ಲಾ ಪಂಚಾಯತ್ ಕಟ್ಟಡ,

2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
5. ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
6. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.